ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡಾವಳಿಗಳು

ವಿಷಯ: 2017-18ನೇ ಸಾಲಿನಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಲಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳ ಬಾಕಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ:41:ಹೆಚ್.ಪಿ.ಸಿ:2017, ಬೆಂಗಳೂರು ದಿನಾಂಕ:13-04-2017.

******

ಪ್ರಸ್ತಾವನೆ:

ಸರ್ಕಾರದ ಉಲ್ಲೇಖಿತ ಆದೇಶದಲ್ಲಿ 2017-18ನೇ ಸಾಲಿನ "ಸರ್ಕಾರಿ ಕಾಲೇಜುಗಳ ಕಟ್ಟಡ ನಿರ್ಮಾಣ" ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ 4202-01-203-1-01-132ರಡಿಯಲ್ಲಿ ರೂ.14617.00 ಲಕ್ಷಗಳು ಮತ್ತು ಲೆಕ್ಕಶೀರ್ಷಿಕೆ 4202-01-203-1-01-139ರಡಿಯಲ್ಲಿ ರೂ.3470.00ಲಕ್ಷಗಳನ್ನು ಒದಗಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ ಮೊದಲನೇ ಕಂತಿನಲ್ಲಿ ಕ್ರಮವಾಗಿ ರೂ.3654.25 ಮತ್ತು ರೂ.867.50 ಲಕ್ಷಗಳು ಒಟ್ಟು ರೂ.4521.75 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಲಾಗಿರುವ ಅನುಬಂಧದಲ್ಲಿ ವಿವರಿಸಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಾಮಗಾರಿಗಳ ಬಾಕಿ ಪಾವತಿ ರೂ.368.44 ಲಕ್ಷಗಳನ್ನು ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಒದಗಿಸಲು ಕೇಂದ್ರ ಕಛೇರಿಯ ಲೆಕ್ಕಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಆದೇಶ.

*ಆದೇಶ ಸಂಖ್ಯೆ: ಕಾಶಿಇ- 157 -ತಾಂ.ಕೋ/ಅಭಿ-2017-18 ಬೆಂಗಳೂರು, ದಿನಾಂಕ:10-07-2017.*

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಅನುಬಂಧದಲ್ಲಿ ವಿವರಿಸಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳ ಬಾಕಿ ಅನುದಾನ ಬಿಡುಗಡೆ ಮಾಡಲು ಲೆಕ್ಕಶೀರ್ಷಿಕೆ "4202-01-203-1-01-139" ರಡಿಯಲ್ಲಿ ರೂ.368.44ಲಕ್ಷಗಳನ್ನು ( ಮೂರು ನೂರಾ ಅರವತ್ತೆಂಟು ಲಕ್ಷ ನಲವತ್ತನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಈ ಕೆಳಕಾಣಿಸಿದ ಷರತ್ತುಗಳಿಗೆ ಒಳಪಟ್ಟು ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಸಂಸ್ಥೆ, ಬೆಂಗಳೂರು ಇವರಿಗೆ ಒದಗಿಸಲು ಕೇಂದ್ರ ಕಛೇರಿಯ ಲೆಕ್ಕಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ.

:ಷರತ್ತುಗಳು : :

- ಪ್ರತಿಯೊಂದು ಕಾಮಗಾರಿಯನ್ನು ನಿಗದಿತ ಕಾಲಮಿತಿ ಮತ್ತು ಅನುದಾನದ ಮಿತಿಯೊಳಗೆ ಪೂರ್ಣಗೊಳಿಸಲು ಹಾಗೂ ಯಾವುದೇ ಕಾರಣಕ್ಕೂ ಹೆಚ್ಚುವರಿ ಅನುದಾನ ಕೋರದಂತೆ ಕಡ್ಡಾಯವಾಗಿ ಸೂಚಿಸಲಾಗಿದೆ.
- ಪೂರ್ಣಗೊಂಡ ಕಾಮಗಾರಿಗಳ ಅಂತಿಮ ಬಿಲ್ಲಿನ ಪ್ರತಿಯನ್ನು ಛಾಯಾ ಚಿತ್ರಗಳೊಂದಿಗೆ ಕೇಂದ್ರ ಕಛೇರಿಯ ತಾಂತ್ರಿಕ ಪರಿಶೀಲನಾ ಕೋಶಕ್ಕೆ ಒದಗಿಸಲು ಸೂಚಿಸಿದೆ.
- ಕಟ್ಟಡವನ್ನು ಪೂರ್ಣಗೊಳಿಸಿ ಪ್ರಾಂಶುಪಾಲರಿಗೆ ಹಸ್ತಾಂತರಿಸಿದ ನಂತರ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಂದ ಅಗತ್ಯ ಎಲ್ಲಾ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸಿದ ಪ್ರಮಾಣ ಪತ್ರ ಮತ್ತು **Project Completion Report** ಅನ್ನು ಹಾಗೂ ಕಡ್ಡಾಯ ಮೂರು ವರ್ಷ ನಿರ್ವಹಣಾ ಅವಧಿಯ ಷರತ್ತಿಗೆ ಒಳಪಟ್ಟಂತೆ ಪಡೆದು ಕೇಂದ್ರ ಕಛೇರಿಗೆ ಸಲ್ಲಿಸುವುದು.
- ಕಟ್ಟಡ ನಿರ್ಮಾಣ ಕಾರ್ಯವನ್ನು ವಹಿಸುವಾಗ ಪ್ರಚಲಿತ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ನಿಯಮಗಳನ್ನು ಹಾಗೂ ಸಂಬಂಧಿಸಿದ ಇತರೆ ಸರ್ಕಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಅಂದಾಜಿನ ಉಳಿಕೆಯಲ್ಲಿ ಕಟ್ಟಡ ಸುಭದ್ರತೆ ಕಾಪಾಡುವ ಅಂಶಗಳನ್ನು ತಾಂತ್ರಿಕ ಕೋಶದ ಅಭಿಯಂತರರಿಂದ ಪಡೆದು ನಿರ್ವಹಿಸುವುದು.

- ಈವರೆಗೆ ಬಿಡುಗಡೆ ಮಾಡಿರುವ ಹಾಗೂ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನದ ಮೊತ್ತಕ್ಕೆ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸುವುದು.
- ಸದರಿ ಮೊತ್ತವನ್ನು ಠೇವಣಿ ವಂತಿಗೆ (DEPOSIT CONTRIBUTION) ಇರಿಸಿ ಕಾಮಗಾರಿಯನ್ನು ತುರ್ತಾಗಿ ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.
- ಕಟ್ಟಡದ ಕಾಮಗಾರಿಯ ಗುಣಮಟ್ಟವನ್ನು ಅಂಗೀಕೃತ ತೃತೀಯ ಏಜೆನ್ಸಿಯಿಂದ ಗುಣಮಟ್ಟ ಪರೀಕ್ಷೆಯನ್ನು ಕೈಗೊಂಡು ವರದಿಯನ್ನು ಈ ಕಛೇರಿಗೆ ಸಲ್ಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.
- ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸದ ಪ್ರಕರಣಗಳಲ್ಲಿ ಸಂಬಂಧಪಟ್ಟ ಗುತ್ತಿಗೆದಾರರಿಗೆ ನಿಯಮಾನುಸಾರ ದಂಡ ವಿಧಿಸಿ ಅದರ ದಾಖಲೆಗಳನ್ನು ಈ ಕಛೇರಿಗೆ ಒದಗಿಸತಕ್ಕದ್ದು.

"ಮಾನ್ಯ ಆಯುಕ್ತರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ".

ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ:

1) ಲೆಕ್ಕಾಧಿಕಾರಿಗಳು ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಗ್ರಾಮೀಣಾಭಿವೃದ್ಧಿ ಭವನ 4 ಮತ್ತು 5ನೇ ಮಹಡಿ, ಆನಂದ್ ರಾವ್ ವೃತ್ತ, ಬೆಂಗಳೂರು-09.
3) ಖಜಾನಾಧಿಕಾರಿಗಳು, ರಾಜ್ಯ ಹುಜೂರ್, ಖಜಾನೆ, ಬೆಂಗಳೂರು-560001,
4) ಮ್ಯಾನೇಜರ್, ಖಜಾನೆ -2 ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು

ಪ್ರತಿ ರವಾನೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
2) ಮಾಹಿತಿ ಅಧಿಕಾರಿಗಳು ಮಾಹಿತಿ ತಂತ್ರಜ್ಞಾನ ವಿಭಾಗ ಕೇಂದ್ರ ಕಛೇರಿ ಬೆಂಗಳೂರು- ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3) ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳು - ಮಾಹಿತಿಗಾಗಿ ಹಾಗೂ ಕಾಲೇಜುಗಳ ಕಟ್ಟಡ ಕಾಮಗಾರಿಯ ಪ್ರಗತಿ ಬಗ್ಗೆ ಸೂಕ್ತ ನಿಗಾವಹಿಸಲು ಮತ್ತು ವರದಿಯನ್ನು ಪ್ರತಿಮಾಹೆ ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.
4) ಎಂ ಪಿಕ್ ಕಡತಕ್ಕೆ.
5) ಕಛೇರಿ ಪ್ರತಿ.